ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 21ನೇ ಮಾರ್ಚ್, 2020

ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿರುವ ಜಿಲ್ಲಾ ಆಸ್ಪತ್ರೆಯ ಡಯಾಲಿಸಿಸ್ ಕೇಂದ್ರದಲ್ಲಿ ತಜ್ಞ ವೈದ್ಯರು ಹಾಗೂ ಸಿಬ್ಬಂದಿಗಳ ಕೊರತೆ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು)

214 (1748) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿರುವ ಜಿಲ್ಲಾ ಆಸ್ಪತ್ರೆಯ ಡಯಾಲಿಸಿಸ್ ಕೇಂದ್ರದಲ್ಲಿ ತಜ್ಞ ವೈದ್ಯರು ಹಾಗೂ ಸಿಬ್ಬಂದಿಗಳ ಕೊರತೆಯಿಂದಾಗಿ ರೋಗಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಡಯಾಲಿಸಿಸ್ ಕೇಂದ್ರದಲ್ಲಿ ಕರ್ತವ್ಯ ನಿರ್ವಹಿಸಬೇಕಾಗಿರುವ ತಜ್ಞ ವೈದ್ಯರು ಹಾಗೂ ಸಿಬ್ಬಂದಿಗಳ ಸಂಖ್ಯೆ ಹಾಗೂ ವಿವರಗಳೇನು ;

(ಇ) ಪ್ರಸ್ತುತ ಈ ಕೇಂದ್ರದಲ್ಲಿ ಅಗತ್ಯವಿರುವಷ್ಟು ಅಥವಾ ಬೇಡಿಕೆ ಇರುವಷ್ಟು ತಜ್ಞ ವೈದ್ಯರು ಹಾಗೂ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆಯೇ ;

(ಈ) ಅಗತ್ಯವಿರುವಷ್ಟು ತಜ್ಞ ವೈದ್ಯರು ಹಾಗೂ ಸಿಬ್ಬಂದಿ ಇಲ್ಲದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಅವರ ಸೇವೆಯನ್ನು ಒದಗಿಸಲಾಗುವುದು ?